ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

(12)

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE: 23/12/20

# ಕರೋನಾ 2.0; ರಾತ್ರಿ ಕರ್ಫ್ಯೂಗೆ ಚಿಂತನೆ

## ಶಾಲಾ-ಕಾಲೇಜು ಆರಂಭದ ಬಗ್ಗೆ ಮತ್ತೊಮ್ಮೆ ಚರ್ಚೆ

## ಸಿಎಸ್ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಸಭೆ ಇಂದು

## ಇಂಗ್ಲೆಂಡ್‌ನಿಂದ ರಾಜ್ಯಕ್ಕೆ 2,127 ಮಂದಿ ಆಗಮನ

23/12/20

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ವಿಶ್ವದ ಹಲವು ರಾಷ್ಟ್ರಗಳಲ್ಲಿ ಕರೋನಾದ ರೂಪಾಂತರ ವೈರಾಣು ಕಾಲಿಟ್ಟಿರುವ ಬೆನ್ನಲ್ಲೇ ರಾಜ್ಯದಲ್ಲಿ ನೈಟ್ ಕರ್ಫ್ಯೂ ಹೇರುವ ಚರ್ಚೆ ದಟ್ಟವಾಗಿದೆ.

ಇಂಗ್ಲೆಂಡ್‌ನಲ್ಲಿ ಕಾಣಿಸಿಕೊಂಡಿರುವ ವೈರಾಣು ರಾಜ್ಯದಲ್ಲಿ ಹಬ್ಬದಂತೆ ತಡೆಯಲು ಈಗಾಗಲೇ ಇಂಗ್ಲೆಂಡ್‌ನಿಂದ ಬರುವ ವಿಮಾನಗಳಿಗೆ ನಿರ್ಬಂಧ ಹೇರಲಾಗಿದೆ. ದೇಶದ ಒಳಗಡೆ ಆಗಮಿಸಿರುವವರಿಗೆ ಕಡ್ಡಾಯವಾಗಿ ಕರೋನಾ ಪರೀಕ್ಷೆ ಮಾಡಿಸಲಾಗುತ್ತಿದೆ. ಆದರೂ ಸೋಂಕು ನಿಯಂತ್ರಿಸಲು ಸಾಧ್ಯವಾಗದಿದ್ದರೆ, ರಾತ್ರಿ ಕರ್ಫ್ಯೂ ಹೇರುವ ಸಾಧ್ಯತೆ ಇದೆ.

ಈ ಬಗ್ಗೆ ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಮಾತನಾಡಿ, 'ಈಗಾಗಲೇ ಹಲವು ರಾಜ್ಯಗಳು ಡಿ.25ರಿಂದ ಜ.5ರವರೆಗೆ ರಾತ್ರಿ ಕರ್ಫ್ಯೂ ಹೇರಿವೆ. ಇದೇ ಮಾದರಿಯಲ್ಲಿ ರಾಜ್ಯದಲ್ಲೂ ಹೇರಿಕೆ ಮಾಡಬೇಕೇ ಎಂಬ ಬಗ್ಗೆ ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಅಭಿಪ್ರಾಯ ಪಡೆದು ಬಳಿಕ ತೀರ್ಮಾನಿಸಲಾಗುವುದು' ಎಂದು ಸ್ಪಷ್ಟಪಡಿಸಿದ್ದಾರೆ.

'ರಾಜ್ಯದಲ್ಲಿಯೂ ಮತ್ತೆ ಲಾಕ್‌ಡೌನ್ ಮಾಡುವ ಬಗ್ಗೆ ಸರಕಾರದ ಚಿಂತನೆ ಇಲ್ಲ, ಕರೋನಾ ನೆಗೆಟಿವ್ ವರದಿ ಇಲ್ಲದೆ ಹೊರ ದೇಶಗಳಿಂದ ರಾಜ್ಯಕ್ಕೆ ಆಗಮಿಸಿರುವ 2,127 ಮಂದಿಯನ್ನು ಪತ್ತೆ ಹಚ್ಚಿ, ಕ್ವಾರಂಟೈನ್ ಮಾಡಲಾಗಿದೆ' ಎಂದು ಹೇಳಿದ್ದಾರೆ.

### ರಾತ್ರಿ ಕರ್ಫ್ಯೂ ಇಲ್ಲ



ಕರೋನಾದ ರೂಪಾಂತರ ವೈರಸ್‌ನ್ನು ಹಿಮ್ಮೆಟ್ಟಿಸಲು ರಾತ್ರಿ ಕರ್ಫ್ಯೂ ಅಗತ್ಯ ಎನ್ನುವ ಅಭಿಪ್ರಾಯಕ್ಕೆ ತದ್ವಿರುದ್ಧವಾಗಿ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಯಡಿಯೂರಪ್ಪ ಅವರು, 'ದೇಶಾದ್ಯಂತ ಈಗಾಗಲೇ ಅಲರ್ಟ್ ಇದೆ. ಪ್ರಧಾನಿ ಕೂಡ ಆತಂಕಕ್ಕೊಳಗಾಗದೆ ಎಚ್ಚರಿಕೆಯಿಂದ ಇರುವಂತೆ ಮನವಿ ಮಾಡಿಕೊಂಡಿದ್ದಾರೆ. ಈಗಾಗಲೇ ಮಹಾರಾಷ್ಟ್ರದಲ್ಲಿ ನೈಟ್ ಕರ್ಫ್ಯೂ ಜಾರಿ ಮಾಡಲಾಗಿದೆ. ಆದರೆ ಆ ಮಾದರಿಯ ಕರ್ಫ್ಯೂ ರಾಜ್ಯದಲ್ಲಿ ಸದ್ಯಕ್ಕೆ ಅಗತ್ಯವಿಲ್ಲ' ಎಂದು ಸ್ಪಷ್ಟಪಡಿಸಿದರು.

**ತಾಯಿ, ಮಗಳ ಮೂಲಕ ಬೆಂಗಳೂರಿಗೆ ಬಂದ ಹೊಸ ವೈರಸ್:** ಹೊಸ ತಳಿಯ ಕರೋನಾ ವೈರಸ್ ಬೆಂಗಳೂರಿನಲ್ಲಿ ಪತ್ತೆಯಾಗಿದೆ. ಬ್ರಿಟನ್‌ನಿಂದ ಬೆಂಗಳೂರಿಗೆ ಬಂದಿಳಿದಿದ್ದ ತಾಯಿ, ಮಗಳಿಗೆ ಕರೋನಾ ವರದಿ ದೃಢಪಟ್ಟಿದೆ. ಇದು ಯಾವ ಸ್ವರೂಪದ ಕರೋನಾ ವೈರಸ್ ಎಂಬುದನ್ನು ಪತ್ತೆ ಮಾಡಲು ನಿಮ್ಹಾನ್ಸ್ ಪ್ರಯೋಗಾಲಯಕ್ಕೆ ಸ್ವಾಬ್ ಮಾದರಿಯನ್ನು ರವಾನೆ ಮಾಡಲಾಗಿದೆ.

### ಬಿಬಿಎಂಪಿ ಆಯುಕ್ತರಿಗೆ ಕರೋನಾ ಸೋಂಕು



ಬೆಂಗಳೂರಿನಲ್ಲಿ ಕರೋನಾ ನಿಯಂತ್ರಣಕ್ಕೆ ಬರುತ್ತಿರುವ ಹೊತ್ತಿನಲ್ಲಿಯೇ ಬಿಬಿಎಂಪಿ ಆಯುಕ್ತ ಮಂಜುನಾಥ್ ಪ್ರಸಾದ್ ಅವರಿಗೆ ಕರೋನಾ ಸೋಂಕು ಕಾಣಿಸಿಕೊಂಡಿದೆ. ಮಂಗಳವಾರ ಕರೋನಾ ಸೋಂಕು ಕಾಣಿಸಿಕೊಂಡಿದ್ದು, ಮನೆಯಲ್ಲಿಯೇ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಿಳಿದುಬಂದಿದೆ.

- ಕೋವಿಡ್ ತಾಂತ್ರಿಕ ಸಲಹಾ ಸಮಿತಿಯೊಂದಿಗೆ ಚರ್ಚಿಸಿ ನೈಟ್ ಕರ್ಫ್ಯೂ ಬಗ್ಗೆ ನಿರ್ಧಾರ
- ಬ್ರಿಟನ್‌ನಿಂದ ಬಂದಿದ್ದ ತಾಯಿ, ಮಗಳ ಗಂಟಲು ದ್ರವ ಪ್ರಯೋಗಾಲಯಕ್ಕೆ ರವಾನೆ

ಡಿಸೆಂಬರ್ 19ರಂದು ಯುಕೆಯಿಂದ ಸಿಲಿಕಾನ್ ಸಿಟಿಗೆ ಬಂದಿಳಿದಿದ್ದರು. ಬಳಿಕ ಖಾಸಗಿ ಲ್ಯಾಬ್‌ನಲ್ಲಿ ಆರ್‌ಟಿಪಿಸಿಆರ್ ಪರೀಕ್ಷೆಗೆ ಒಳಗಾಗಿದ್ದರು. ಈ ವರದಿ ಬಂದಿದ್ದು, ಇವರಲ್ಲಿ ಕರೋನಾ ದೃಢಪಟ್ಟಿದೆ. ಈ ಹಿನ್ನೆಲೆ ಬಿಬಿಎಂಪಿ ಆರೋಗ್ಯಾಧಿಕಾರಿಗಳ ತಂಡ ಮಂಗಳವಾರ ಭೇಟಿ ನೀಡಿ ಹೊಸ ವೈರಸ್ ತಳಿ ಪತ್ತೆ ಮಾಡಲು ಅವರ ಸ್ವಾಬ್ ಸಂಗ್ರಹ ಮಾಡಿದ್ದು, ಅದನ್ನು ನಿಮ್ಹಾನ್ಸ್ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ.